

# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 36 | Pages. 2 | Date: 03-01-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 36 - ಪುಟಗಳು : 2 | 03-01-2026 | ಶನಿವಾರ | Ph: 8762954248 | ದರ : ₹1

# ರೈಲ್ವೆ ಮೇಲ್ಸೇತುವೆಗೆ ರಾಜ್ಯ ಸರ್ಕಾರ ಹಣ ನೀಡಿದೆ

## ಸರ್ವಿಸ್ ರಸ್ತೆ ಸಮಸ್ಯೆಗೆ ಶೀಘ್ರ ಪರಿಹಾರ | ಸಂಸದರ ಭರವಸೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯ ಸರ್ಕಾರ ತನ್ನ ಪಾಲಿನ 24 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದ ಬಳಿಕ ನಗರದ ರೈಲ್ವೆ ಮೇಲ್ಸೇತುವೆ ಕಾಮಗಾರಿ ಚುರುಕು ಪಡೆದಿದೆ. ಸೆಪ್ಟೆಂಬರ್ ವೇಳೆಗೆ ಕಾಮಗಾರಿ ಮುಕ್ತಾಯವಾಗಲಿದೆ ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ನಗರದ ಎನ್.ಆರ್. ವೃತ್ತದ ಬಳಿ ಶುಕ್ರವಾರ ಸ್ಥಳ ಪರಿಶೀಲಿಸಿ ಸುದ್ದಿಗಾರರೊಂದಿಗೆ ಮಾತನಾಡಿ, ರೈಲ್ವೆ ಮೇಲ್ಸೇತುವೆಯ ಸರ್ವಿಸ್ ರಸ್ತೆ ಅವೈಜ್ಞಾನಿಕವಾಗಿರುವ ಕುರಿತು ಸ್ಥಳೀಯರಿಂದ ದೂರು ಬಂದಿದ್ದು, ಪರ್ಯಾಯ ಕ್ರಮಗಳ ಕುರಿತು ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ಸುತ್ತಲಿನ ನಿವಾಸಿಗಳ ಸಮಸ್ಯೆಗಳಿಗೂ ಸ್ಪಂದಿಸಲಾಗುವುದು. ಮುಖ್ಯ ವೃತ್ತದಲ್ಲಿ ಟ್ರಾಫಿಕ್ ಸಮಸ್ಯೆ ಇದೆ. ವಾಹನ ಸಂಚಾರ ಹಾಗೂ ಪಾದಚಾರಿಗಳಿಗೆ ಸಮಸ್ಯೆಯಾಗುತ್ತಿದೆ.




ಕಾಮಗಾರಿ ಇನ್ನೇನು ಮುಗಿಯುವ ಹಂತ ತಲುಪಿದ ನಂತರ ಸಮಸ್ಯೆ ಕೇಳಿಬಂದಿದೆ. ಆದರೂ ಸಾರ್ವಜನಿಕ ದೂರಿನ ಬಗ್ಗೆ ಕೂಲಂಕುಶ ಪರಿಶೀಲನೆ ನಡೆಸಿ ಸಾಧಕ-ಬಾಧಕಗಳ ಬಗ್ಗೆ ಅವಲೋಕಿಸಿ 7 ದಿನಗಳ ಒಳಗಾಗಿ ವರದಿ ನೀಡುವಂತೆ ಸೂಚಿಸಿದ್ದೇನೆ. ಅಧಿಕಾರಿಗಳು ವರದಿ ಕೊಡಲಿ, ಅದನ್ನು ಪರಿಶೀಲಿಸಿದ ಬಳಿಕ ಮುಂದೇನು ಮಾಡಬೇಕೆಂದು ಚರ್ಚಿಸಿ ಯೋಚಿಸಲಾಗುವುದು ಎಂದರು.

ರೈಲ್ವೆ ಇಲಾಖೆಯ ಯಾವುದೇ ಕೆಲಸ-ಕಾರ್ಯಗಳು ಕಟ್ಟುನಿಟ್ಟಾಗಿ ನಡೆಯುತ್ತವೆ. ಬದಲಾವಣೆ ಮಾಡುವುದು ಕಷ್ಟ. ಆದರೂ ವರದಿ ಬಂದ ನಂತರ ವೈಜ್ಞಾನಿಕವಾಗಿ ಪರಿಹಾರ ಕಂಡು ಹಿಡಿಯಬಹುದೇ ಅಥವಾ ಬೇರೇನು ಮಾಡಬಹುದು ಎಂಬುದರ ಬಗ್ಗೆ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

2026ರ ಆಗಸ್ಟ್ ವೇಳೆಗೆ ಮೇಲ್ಸೇತುವೆ ಕಾಮಗಾರಿ ಪೂರ್ಣಗೊಳ್ಳುತ್ತದೆ. ಜೂನ್ ಅಂತ್ಯಕ್ಕೆ ಸಂಪೂರ್ಣ ಕಾಮಗಾರಿ ಮುಗಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದರು. ಆದರೆ ಸದ್ಯದ ಲಕ್ಷಣ ನೋಡಿದರೆ ನಿಗದಿತ ಗಡುವಿನೊಳಗೆ ಕೆಲಸ ಮುಗಿಸುವುದು ಅಸಾಧ್ಯ. ಅಧಿಕಾರಿಗಳು ಹೇಳಿದಂತೆ ಜೂನ್‌ಗೆ ಆಗದಿದ್ದರೆ ಆಗಸ್ಟ್-ಸೆಪ್ಟೆಂಬರ್ ವೇಳೆಗೆ ಕೆಲಸವನ್ನು ಸಂಪೂರ್ಣವಾಗಿ ಪೂರ್ಣಗೊಳಿಸಲಾಗುವುದು. ಎರಡೂ ಕಡೆಯ ಒಟ್ಟು ನಾಲ್ಕು ಪಥದ ಮೇಲ್ಸೇತುವೆ ಕಾಮಗಾರಿ ಮುಗಿಯುತ್ತದೆ. ಆಗ ನಗರದ ಹೃದಯ ಭಾಗದಲ್ಲಿ ವಾಹನ ದಟ್ಟಣೆ ಸಮಸ್ಯೆ ನಿವಾರಣೆಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಾಕಿ ಇರುವ ಮೇಲ್ಸೇತುವೆ ಕಾಮಗಾರಿಗೆ ಅನುದಾನದ ಕೊರತೆ ಇಲ್ಲ. ರಾಜ್ಯ ಸರ್ಕಾರ ತನ್ನ ಪಾಲಿನ 24 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದ ಬಳಿಕವಷ್ಟೇ ಕೆಲಸಕ್ಕೆ ವೇಗ ಸಿಕ್ಕಿದೆ. ವೇಗವಾಗಿ ಕಾಮಗಾರಿ ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ರೈಲ್ವೆ ಇಲಾಖೆಯ ಅಧಿಕಾರಿಗಳು, ಬಿಜೆಪಿ ಹಾಗೂ ಕಾಂಗ್ರೆಸ್ ಮುಖಂಡರು ಹಾಜರಿದ್ದರು.

### ಅನುದಾನಕ್ಕಾಗಿ ಮತ್ತೊಮ್ಮೆ ಪ್ರಸ್ತಾವನೆ

ನಗರಸಭೆಯಾಗಿದ್ದ ಹಾಸನ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದ ಬಳಿಕ ಮೂಲಸೌಕರ್ಯ ಅವಶ್ಯಕತೆ ಹೆಚ್ಚಾಗಿದೆ. ಸಣ್ಣ ಕುಟುಂಬವೊಂದು ದೊಡ್ಡದಾದಾಗ ಅವಶ್ಯಕತೆಗಳ ಪಟ್ಟಿಯೂ ಹೆಚ್ಚಾಗುತ್ತದೆ. ಸಿಬ್ಬಂದಿ, ವಿವಿಧ ಸವಲತ್ತುಗಳನ್ನು ಕಲ್ಪಿಸಲಾಗುತ್ತದೆ. ಈ ಕುರಿತು ಮುಂದಿನ ವಾರ ಮಹಾನಗರ ಪಾಲಿಕೆ ಸಭೆ ನಡೆಸಿ ಅಗತ್ಯ ಅನುದಾನಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದೆಂದು ಸಂಸದ ಶ್ರೇಯಸ್ ಪಟೇಲ್ ಅವರು ಭರವಸೆ ನೀಡಿದರು.

> ರೈಲ್ವೆ ಮೇಲ್ಸೇತುವೆ ಕಾಮಗಾರಿಯನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಜಿಲ್ಲಾ ನ್ಯಾಯಾಲಯ ಮುಂಭಾಗ ಕೆಲಸ ಭರದಿಂದ ಸಾಗುತ್ತಿದೆ. ಹಂತ ಹಂತವಾಗಿ ಕಾಮಗಾರಿ ಮುಗಿಯಲಿದ್ದು ಮಳೆಗಾಲ ಮುಗಿದ ಬಳಿಕ ಎರಡೂ ಬದಿ ವಾಹನ ಸಂಚಾರಕ್ಕೆ ಅವಕಾಶ ಮಾಡಿಕೊಡಲಾಗುವುದು.
>
> **– ಶ್ರೇಯಸ್ ಪಟೇಲ್, ಸಂಸದ**

# ಎಲ್ಲೆಡೆ ವ್ಯಾಪಿಸಿದ ಯಕೃತ್ತು ಸಮಸ್ಯೆ: ನಿರ್ಲಕ್ಷ್ಯ ಬೇಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ನಗರ ಹಾಗೂ ಗ್ರಾಮೀಣ ಭಾಗದಲ್ಲಿ ಯಕೃತ್ತಿನ ಕಾಯಿಲೆ ಆಘಾತಕಾರಿ ಮಟ್ಟದಲ್ಲಿ ಹೆಚ್ಚುತ್ತಿದ್ದು ಸಾರ್ವಜನಿಕರು ಎಚ್ಚರ ವಹಿಸಬೇಕು. ಆರಂಭದಲ್ಲೇ ಚಿಕಿತ್ಸೆ ಪಡೆಯದಿದ್ದರೆ ಸಮಸ್ಯೆಯಾಗಲಿದೆಯೆಂದು ಬೆಂಗಳೂರು ಮಣಿಪಾಲ್ ಆಸ್ಪತ್ರೆಯ ಟ್ರಾನ್ಸ್‌ಪ್ಲಾಂಟ್ ಹೆಮಟಾಲಜಿ ವಿಭಾಗದ ಮುಖ್ಯ ಸಲಹೆಗಾರ ಡಾ. ಸಂದೀಪ್ ಸತ್ಸಂಗಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಮದ್ಯಪಾನ ಸೇವನೆ ಸಂಬಂಧಿತ ಯಕೃತ್ತಿನ ಕಾಯಿಲೆ ಒಂದೆಡೆಯಾದರೆ ಚಯಾಪಚಯ ಸಂಬಂಧಿತ ಕೊಬ್ಬು (ಎನ್‌ಎಎಲ್‌ಎಫ್‌ಡಿ) ಯಕೃತ್ತಿನ ಕಾಯಿಲೆಗೆ ಪ್ರಮುಖ ಕಾರಣ ಎಂದರು.

10 ರಿಂದ 15 ವರ್ಷಗಳ ವರೆಗೆ ಯಾವುದೇ ಸ್ಪಷ್ಟ ಲಕ್ಷಣಗಳಿಲ್ಲದೆ ಕಾಯಿಲೆ ನಿಧಾನವಾಗಿ ಬೆಳೆಯುತ್ತದೆ. ಕೊಬ್ಬಿನ ಯಕೃತ್ತು ಹೊಂದಿರುವ ಶೇ.30ಕ್ಕೂ ಹೆಚ್ಚು ರೋಗಿಗಳು ಮೊದಲ ಮೌಲ್ಯಮಾಪನದ ಹಂತದಲ್ಲೇ ಫೈಬ್ರೋಸಿಸ್‌ಗೆ ಒಳಗಾಗಿರುವುದು ಕಂಡುಬಂದಿದೆ.

ಅದರಿಂದ ರೋಗಿಗಳು ಚಿಕಿತ್ಸೆ ಪಡೆಯಲು ತಡಮಾಡಿ, ಕಾಯಿಲೆ ಸಿರೋಸಿಸ್ ಅಥವಾ ಯಕೃತ್ತು ವೈಫಲ್ಯದ ಹಂತ ತಲುಪಿದ ಬಳಿಕ ಮಾತ್ರ ಆಸ್ಪತ್ರೆಗೆ ಬರುತ್ತಿದ್ದಾರೆ. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸದೆ ತಕ್ಷಣ ವೈದ್ಯರ ಭೇಟಿಯಾಗಬೇಕು ಎಂದು ಹೇಳಿದರು.

ಇತ್ತೀಚಿನ ವರ್ಷಗಳಲ್ಲಿ ಎನ್‌ಎಎಲ್‌ಎಫ್‌ಡಿ ಪ್ರಕರಣಗಳು ವೇಗವಾಗಿ ಹೆಚ್ಚುತ್ತಿದ್ದು, ಯಕೃತ್ತಿನ ಸಮಸ್ಯೆಗಾಗಿ ಚಿಕಿತ್ಸೆಗೆ ಬಂದ ರೋಗಿಗಳಲ್ಲಿ ಶೇ.55-60 ರಷ್ಟು ಮಂದಿಗೆ ಈ ಕಾಯಿಲೆ ಪತ್ತೆಯಾಗುತ್ತಿದೆ. ಅದರಲ್ಲಿ ಮದ್ಯ ಸೇವಿಸದವರೂ ಸೇರಿರುವುದು ಆತಂಕಕಾರಿ ಅಂಶವಾಗಿದೆ. ಬೊಜ್ಜು, ಮಧುಮೇಹ, ರಕ್ತದೊತ್ತಡ, ಕೊಲೆಸ್ಟ್ರಾಲ್ ಅಸಮತೋಲನ ಹಾಗೂ ನಿತ್ಯ ಮದ್ಯಪಾನ ಮಾಡುವವರು ಹೆಚ್ಚಿನ ಅಪಾಯದ ಗುಂಪಿಗೆ ಸೇರುತ್ತಾರೆಂದು ಎಚ್ಚರಿಸಿದರು.

ಇತ್ತೀಚಿನ 1-2 ವರ್ಷಗಳಲ್ಲಿ ಪರಿಚಯಿಸಲಾದ ಹೊಸ ಔಷಧಗಳು ಯಕೃತ್ತಿನ ಫೈಬ್ರೋಸಿಸ್ ಹಿಮ್ಮುಖಗೊಳಿಸುವಲ್ಲಿ ಸಹಕಾರಿಯಾಗುತ್ತಿದ್ದು, ರೋಗಿಗಳಿಗೆ ಹೊಸ ಆಶಾಕಿರಣವಾಗಿವೆ. ಅದಕ್ಕೆ ಎಲ್ಲ ರೀತಿಯ ಚಿಕಿತ್ಸೆ ನಮ್ಮ ಆಸ್ಪತ್ರೆಯಲ್ಲಿ ದೊರೆಯುತ್ತದೆಂದರು.

# ಬಾಂಗ್ಲಾದಲ್ಲಿ ಹಿಂದುಗಳ ಹತ್ಯೆ ಚನ್ನರಾಯಪಟ್ಟಣ ಬಂದ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಬಾಂಗ್ಲಾ ದೇಶದಲ್ಲಿ ಹಿಂದುಗಳ ಮೇಲೆ ನಡೆಯುತ್ತಿರುವ ದೌರ್ಜನ್ಯ ಖಂಡನೀಯ ಎಂದು ಬಿಜೆಪಿ ಮುಖಂಡ ಸಿ.ಆರ್.ಚಿದಾನಂದ್ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದಲ್ಲಿ ಬಂದ್ ಆಚರಿಸಿ ಹಿಂದುಪರ ಸಂಘಟನೆಗಳ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ಬಾಂಗ್ಲಾ ದೇಶಕ್ಕೆ ಭಾರತ ನೀಡಿದ ಸಹಕಾರವನ್ನು ಬಾಂಗ್ಲಾ ಎಂದಿಗೂ ಮರೆಯುವಂತಿಲ್ಲ ಎಂದರು.




ಭಾರತ ದೇಶದ ಸಹಾಯ ಸಹಕಾರವನ್ನು ಮರೆತ ಬಾಂಗ್ಲಾದೇಶವು ಈ ದಿನ ಬಾಂಗ್ಲಾದೇಶದಲ್ಲಿ ವಾಸಿಸುತ್ತಿರುವ ಅಲ್ಪಸಂಖ್ಯಾತರಾದ ಹಿಂದೂಗಳ ಮೇಲೆ ದೌರ್ಜನ್ಯ ನಡೆಸುತ್ತಿರುವುದು ಸರಿಯಲ್ಲ. ಈ ಕೂಡಲೇ ವಲಸಿಗರನ್ನು ಕರ್ನಾಟಕದಿಂದ ಹೊರ ಹಾಕಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ವಿಎಚ್‌ಪಿ ಜಿಲ್ಲಾಧ್ಯಕ್ಷ ಬೆಕ್ಕ ರಮೇಶ್, ಜಯರಾಮ್, ಮುಖಂಡರಾದ ನಂಜುಂಡ ಮೈಮ್, ದಮ್ಮನಿಂಗಲ ರವಿ, ಕೆರೆಬೀದಿ ಜಗದೀಶ್, ಆನಂದ್, ಹರ್ಷ ವರ್ಧನ್, ನವೀನ್, ಮಂಜುನಾಥ್, ಹರೀಶ್, ರೂಪೇಶ್, ಅನಿಲ್ ಇತರರಿದ್ದರು.

# ಭ್ರಷ್ಟಾಚಾರ ನಿರ್ಮೂಲನೆ ಕಾರ್ಯಾಚರಣೆ ಸಮಿತಿ ಅಸ್ತಿತ್ವಕ್ಕೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭ್ರಷ್ಟಾಚಾರ ರಹಿತ ಹಾಗೂ ಸದೃಢ ಸಮಾಜ ನಿರ್ಮಾಣದ ಉದ್ದೇಶದಿಂದ ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನೆ ಕಾರ್ಯಾಚರಣೆ ಸಮಿತಿ ಜಿಲ್ಲೆಯಲ್ಲಿ ಆರಂಭವಾಗಿದೆ ಎಂದು ಸಮಿತಿಯ ಜಿಲ್ಲಾಧ್ಯಕ್ಷ ಮಲ್ಲೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಕಳೆದ ತಿಂಗಳು ಪುಷ್ಪಗಿರಿ ಮಠದಲ್ಲಿ ನಡೆದ ಕಾರ್ಯಕ್ರಮದಲ್ಲಿ ದಕ್ಷಿಣ ಭಾರತದ ಪ್ರಾಂತೀಯ ಅಧ್ಯಕ್ಷ ಎ.ಎಸ್. ಭದ್ರಶೆಟ್ಟಿ, ಕರ್ನಾಟಕ ಪ್ರಾಂತೀಯ ಅಧ್ಯಕ್ಷ ಕೆ.ಪ್ರಭಾಕರ್, ಕರ್ನಾಟಕ ಪ್ರಾಂತೀಯ ಪ್ರಧಾನ ಕಾರ್ಯದರ್ಶಿ ಕೆ. ದಯಾನಂದ ಸೇರಿ ಹಲವು ಗಣ್ಯರ ಉಪಸ್ಥಿತಿಯಲ್ಲಿ ಜಿಲ್ಲಾ ಸಮಿತಿ ರಚನೆಯಾಗಿದೆ ಎಂದರು.

ಮಾನವೀಯ ನೆಲೆಯ ಮೇಲೆ ಸಾಮಾಜಿಕ, ಪರಿಸರ ಹಾಗೂ ಆಡಳಿತಾತ್ಮಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದು, ಭ್ರಷ್ಟಾಚಾರ ಮುಕ್ತ ಸಮಾಜ ನಿರ್ಮಾಣ ಸಂಸ್ಥೆಯ ಮೂಲ ಉದ್ದೇಶವಾಗಿದೆ. ಸಂಸ್ಥೆಯ ಸ್ಥಾಪಕ ಡಾ.ರಾಜೇಶ್ ಶುಕ್ಲ ಅವರು ಮಹಾತ್ಮ ಗಾಂಧಿ ಹಾಗೂ ಅಣ್ಣಾ ಹಜಾರೆ ಅವರ ಸಿದ್ಧಾಂತಗಳಿಂದ ಪ್ರೇರಿತರಾಗಿ ಭಾರತೀಯ ಸಂವಿಧಾನದ ಅಡಿಯಲ್ಲಿ ದೇಶದ ಹಿತಕ್ಕಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇಂದಿಗೆ ದೇಶದ ವಿವಿಧ ರಾಜ್ಯಗಳಲ್ಲಿ ಸಂಸ್ಥೆ ಕಾರ್ಯ ನಿರ್ವಹಿಸುತ್ತಿದ್ದು, ಸುಮಾರು ಒಂದು ಲಕ್ಷಕ್ಕೂ ಹೆಚ್ಚು ಸದಸ್ಯರು ನೋಂದಾಯಿತರಾಗಿದ್ದಾರೆಂದು ಹೇಳಿದರು.

ಸಮಿತಿ ಜಾತಿ-ಧರ್ಮ ಬೇಧ ಭಾವವಿಲ್ಲದೆ ಸಮಾನತೆಯನ್ನು ಉತ್ತೇಜಿಸುವುದು, ಮಹಿಳೆಯರು ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆಗೆ ಶೈಕ್ಷಣಿಕ ಮತ್ತು ಕಾನೂನು ನೆರವು ನೀಡುವುದು, ದೇಶದ ಏಕತೆ, ಅಖಂಡತೆ, ಶಾಂತಿ ಹಾಗೂ ಸಮೃದ್ಧಿಗಾಗಿ ಜನಜಾಗೃತಿ ಮೂಡಿಸುವುದು ತನ್ನ ಪ್ರಮುಖ ಕರ್ತವ್ಯಗಳಾಗಿವೆ. ಭ್ರಷ್ಟಾಚಾರ ನಿರ್ಮೂಲನೆಗಾಗಿ ಸಿಬಿಐ, ಲೋಕಾಯುಕ್ತ, ಸಿಐಡಿ, ಮಾನವ ಹಕ್ಕು ಆಯೋಗ ಹಾಗೂ ನ್ಯಾಯಾಲಯಗಳೊಂದಿಗೆ ಕಾನೂನು ಬದ್ಧವಾಗಿ ಸಹಕರಿಸುವುದೂ ಸಮಿತಿಯ ಗುರಿಯಾಗಿದೆ ಎಂದರು.

ಭ್ರಷ್ಟಾಚಾರಕ್ಕೆ ಸಂಬಂಧಿಸಿದ ಯಾವುದೇ ದೂರುಗಳಿದ್ದರೂ ಸಾರ್ವಜನಿಕರು ಸಮಿತಿ ಜಿಲ್ಲಾಧ್ಯಕ್ಷ ಮಲ್ಲೇಶ್ (ಮೊ: 9480022704), ಕಾರ್ಯಾಧ್ಯಕ್ಷ ಎಂ.ಎಸ್. ಸುಂದರ್ (ಮೊ: 8217420285) ಇಲ್ಲಿಗೆ ಕರೆ ಮಾಡಿ ಮಾಹಿತಿ ನೀಡಬಹುದು.

ಭ್ರಷ್ಟಾಚಾರ ಮುಕ್ತ ಆಡಳಿತ ಮತ್ತು ಜನಹಿತ ರಕ್ಷಣೆ ಸಂಕಲ್ಪದೊಂದಿಗೆ ಆರಂಭವಾಗಿರುವ ಸಮಿತಿ, ಜಿಲ್ಲೆಯಲ್ಲಿ ಸಾಮಾಜಿಕ ಜಾಗೃತಿ ಮತ್ತು ನ್ಯಾಯಪರ ಹೋರಾಟಕ್ಕೆ ಹೊಸ ಬಲ ನೀಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಸಮಿತಿ ಕಾರ್ಯಾಧ್ಯಕ್ಷ ಎಂ.ಎಸ್. ಸುಂದರ್, ಪ್ರಧಾನ ಕಾರ್ಯದರ್ಶಿ ಸಣ್ಣೇಗೌಡ, ಖಜಾಂಚಿ ಜಯಕುಮಾರ್, ಕಾರ್ಯದರ್ಶಿ ಎಸ್.ಗಂಗಾಧರ್, ಪುಟ್ಟಶೆಟ್ಟಿ, ಕೃಷ್ಣಕುಮಾರ್, ನಾಗರಾಜ್ ಇದ್ದರು.

# ತಂಬಾಕು ಬೆಲೆ ತಾರತಮ್ಯ ನಿವಾರಣೆಗಾಗಿ ಜ. 5ಕ್ಕೆ ಪ್ರತಿಭಟನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಂಬಾಕು ಬೆಲೆ ತಾರತಮ್ಯವನ್ನು ಸರಿಪಡಿಸುವಂತೆ ಅಗ್ರಹಿಸಿ ಜ. 5 ರಂದು ಹಾಸನದ ಸಂಸದರ ಕಚೇರಿ ಮುಂದೆ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ರೈತ ಸಂಘದ ಅಧ್ಯಕ್ಷ ಯೋಗಣ್ಣ ತಿಳಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ತಂಬಾಕು ಮಾರುಕಟ್ಟೆ ಆರಂಭವಾಗಿ ಮೂರು ತಿಂಗಳು ಕಳೆದರೂ ಬೆಲೆಯಲ್ಲಿ ಹೆಚ್ಚಳವಾಗಿಲ್ಲ. 320 ರೂ.ಗೆ ಪ್ರಾರಂಭವಾದ ಬೆಲೆ 275 -280 ರೂ. ಸರಾಸರಿ ಬೆಲೆಯಲ್ಲಿ ಮಾರಾಟವಾಗುತ್ತಿದೆ. ಆಂಧ್ರ ಪ್ರದೇಶದಲ್ಲಿ 145 ಮಿಲಿಯನ್‌ಗೆ ಬದಲು 250 ಮಿಲಿಯನ್ ತಂಬಾಕು ಬೆಳೆದರೂ 450 ರೂ. ಗರಿಷ್ಠ ಬೆಲೆ ಕಂಡುಕೊಂಡಿದೆ. ಈ ಬೆಲೆ ತಾರತಮ್ಯದ ವಿರುದ್ಧ ರಾಜ್ಯದ ಸಂಸದರಾಗಲಿ, ವಾಣಿಜ್ಯ ಇಲಾಖೆಯಾಗಲಿ ಚಕಾರ ಎತ್ತುತ್ತಿಲ್ಲ. ದೇಶಕ್ಕೆ ಒಂದೇ ತಂಬಾಕು ಮಂಡಳಿಯಾದರೂ ಈ ದರ ತಾರತಮ್ಯದ ಹಿಂದಿನ ಮರ್ಮವಾದರೂ ಏನು ಎಂದು ಪ್ರಶ್ನಿಸಿದರು.

ಆಲೂಗೆಡ್ಡೆ, ರಾಗಿ, ಮತ್ತಿತರ ಬೆಳೆಗಳಿಗೆ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಇದೆ. ಆದರೆ 45 ಸಾವಿರ ಕೋಟಿ ರೂ. ವಿದೇಶಿ ವಿನಿಮಯ ತಂದು ಕೊಡುವ ತಂಬಾಕಿಗೆ ಈ ಬೆಳೆ ವಿಮೆ ಸೌಲಭ್ಯ ಏಕಿಲ್ಲ, ತಂಬಾಕು ಬೆಳೆಗೂ ಈ ಯೋಜನೆ ಜಾರಿಯಾಗಬೇಕು. ಬೆಳೆಗಾರರು ತಂಬಾಕನ್ನು ಹದಗೊಳಿಸುವ ವೇಳೆ ಬರುವ ಹೋಗೆ, ಘಾಟು ಮುಂತಾದ ಅಂಶಗಳಿಂದ ಹಲವು ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ. ಆದರೆ ಮಂಡಳಿ ರೈತರಿಗೆ ಆರೋಗ್ಯ ವಿಮಾ ಸೌಲಭ್ಯ ಕಲ್ಪಿಸಿಲ್ಲ, ಅರೋಗ್ಯ ವಿಮೆ ಜಾರಿಯಾಗಬೇಕು. ತಂಬಾಕು ಬೆಳೆಗಾರರ ಕ್ಷೇಮಾಭಿವೃದ್ಧಿ ನಿಧಿಯಿಂದ ಮೃತಪಟ್ಟ ಕುಟುಂಬಕ್ಕೆ 50 ಸಾವಿರ ರೂ. ಸಹಾಯಧನ ನೀಡುತ್ತಿದ್ದು, ಅದನ್ನು 5 ಲಕ್ಷ ರೂ.ಗೆ ಏರಿಸಬೇಕು. ಇಷ್ಟೆಲ್ಲಾ ಸಮಸ್ಯೆಗಳಿದ್ದರೂ ಬೆಳೆಗಾರರ ಹಿತರಕ್ಷಣೆ ಕುರಿತು ಯಾವ ಸಂಸದರು ಮಾತನಾಡುತ್ತಿಲ್ಲ. ಈ ಬಗ್ಗೆ ಸಂಸದರ ಗಮನ ಸೆಳೆಯಲು ಸಂಸದರ ಕಚೇರಿ ಮುಂದೆ ಧರಣಿ ಹಮ್ಮಿಕೊಂಡಿರುವುದಾಗಿ ಹೇಳಿದರು.

ರೈತ ಸಂಘದ ಜಿಲ್ಲಾ ಸಂಚಾಲಕ ಬಂದಿಗನಹಳ್ಳಿ ರವಿ, ಸದಸ್ಯರಾದ ಮಂಜುನಾಥ್, ರಮೇಶ್, ಅಣ್ಣಾಜಪ್ಪ, ನಟರಾಜ್, ಈರೇಗೌಡ ಇದ್ದರು.

# ಜ.6 ರಂದು ‘ನಮಗೂ ಬದುಕು ಕೊಡಿ’ ನಾಟಕ ಪ್ರದರ್ಶನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಚನ್ನರಾಯಪಟ್ಟಣದ ಪ್ರತಿಮಾ ಟ್ರಸ್ಟ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜ.6 ರಂದು ಹಾಸನದ ಹಾಸನಾಂಬ ಕಲಾಕ್ಷೇತ್ರದಲ್ಲಿ ನಮಗೂ ಬದುಕು ಕೊಡಿ ಎಂಬ ಪರಿಸರ ಸ್ನೇಹಿ ನಾಟಕ ಪ್ರದರ್ಶನ ಆಯೋಜಿಸಲಾಗಿದೆ ಎಂದು ಪ್ರತಿಮಾ ಟ್ರಸ್ಟ್ ಅಧ್ಯಕ್ಷ ಉಮೇಶ್ ತೆಂಕನಹಳ್ಳಿ ಹೇಳಿದರು.

ಜ.6ರ ಬೆಳಿಗ್ಗೆ 10 ಗಂಟೆಗೆ ಕಾರ್ಯಕ್ರಮ ಪ್ರಾರಂಭಗೊಳ್ಳಲಿದೆ. ತಣ್ಣೀರುಹಳ್ಳ ಮಠದ ಮಠಾಧೀಶ ಶ್ರೀ ವಿಜಯಕುಮಾರ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸುವರು. ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಚಾಲನೆ ನೀಡಲಿದ್ದಾರೆ ಎಂದರು.

ಪ್ರಕೃತಿಗೆ ಸಂಬಂಧಪಟ್ಟ ವಿಚಾರಗಳನ್ನು ಒಳಗೊಂಡಿರುವ ಪರಿಸರ ಸ್ನೇಹಿ ಕಥೆ ಇದಾಗಿದೆ. ಪ್ರತಿಮಾ ಟ್ರಸ್ಟ್ ಅಧ್ಯಕ್ಷ ಉಮೇಶ್ ತೆಂಕನಹಳ್ಳಿ ಅವರು ನಾಟಕ ರಚನೆ ಮತ್ತು ನಿರ್ದೇಶನ ಮಾಡಲಿದ್ದಾರೆ ಎಂದು ತಿಳಿಸಿದರು.



ಶಾರದಮ್ಮ ಮತ್ತು ಸುಮ ಅವರು ಹಿನ್ನೆಲೆ ಸಂಗೀತ ನೀಡಲಿದ್ದು ಎ.ಎಲ್. ನಾಗೇಶ್ ಮತ್ತು ಮಮತಾ ಹಿನ್ನೆಲೆ ವಾದ್ಯ ನುಡಿಸಲಿದ್ದಾರೆ. ಡಿ.ಜಗದೀಶ್ ಚಂದ್ರ ಮತ್ತು ಸುಜಾತ ಅವರು ವಸ್ತ್ರ ವಿನ್ಯಾಸ ಜವಾಬ್ದಾರಿ ನಿರ್ವಹಿಸಲಿದ್ದು ಸುರೇಶ್ ಅತ್ನಿ ಮತ್ತು ಹೆಚ್.ಎನ್.ದೇವರಾಜು ರಂಗ ಸಜ್ಜಿಕೆ ರೂಪಿಸಲಿದ್ದಾರೆ. ಶಿಲ್ಪ ಮತ್ತು ನಿರ್ಮಲ ಪ್ರಸಾದನ ವ್ಯವಸ್ಥೆ ಮಾಡಲಿದ್ದು ಶಾಡ್ರಾಕ್.ಪಿ ಅವರು ಬೆಳಕಿನ ನಿರ್ವಹಣೆ ಮಾಡಲಿದ್ದಾರೆ ಎಂದರು.

ಶಾಸಕ ಸಿ.ಎನ್.ಬಾಲಕೃಷ್ಣ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಕೆ.ಎನ್. ಬಲರಾಮು, ರಂಗಕರ್ಮಿ ಪ್ರಸಾದ್ ರಕ್ಷಿದಿ ಹಾಗೂ ಹಾಸನದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ತಾರಾನಾಥ್ ಹಾಗೂ ವಿವಿಧ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

# ತಣ್ಣೀರುಹಳ್ಳ ಮಠದಲ್ಲಿ ನಾಳೆ ಭಕ್ತರ ಸಭೆ

ಹಾಸನ: ನಗರದ ತಣ್ಣೀರುಹಳ್ಳ ಮಠದಲ್ಲಿ ಶ್ರೀ ವಿಜಯಕುಮಾರ ಸ್ವಾಮೀಜಿ ಅವರ ಅಧ್ಯಕ್ಷತೆಯಲ್ಲಿ ಜ.4ರ ಭಾನುವಾರ ಬೆಳಿಗ್ಗೆ 10 ಗಂಟೆಗೆ ಶ್ರೀಮಠದಲ್ಲಿ ಭಕ್ತರ ಸಭೆ ಕರೆಯಲಾಗಿದೆ. ಅಂದು ಕ್ಯಾಲೆಂಡರ್ ಬಿಡುಗಡೆ ಸಮಾರಂಭ ನೆರವೇರಲಿದೆ. ಏ. 26ರ ಬಸವ ಜಯಂತಿ, ತ್ರಿವಿಧ ದಾಸೋಹಿ ಶ್ರೀ ಶಿವಕುಮಾರ ಸ್ವಾಮೀಜಿ ಜಯಂತ್ಯುತ್ಸವ, ತಣ್ಣೀರುಹಳ್ಳ ಮಠಾಧೀಶರಾಗಿದ್ದ ಲಿಂಗೈಕ್ಯ ಶ್ರೀ ಶಿವಲಿಂಗ ಸ್ವಾಮೀಜಿ ಅವರ 92ನೇ ಜಯಂತ್ಯುತ್ಸವ, ಶ್ರೀ ಶಿವಲಿಂಗ ಸ್ವಾಮೀಜಿ ದಾಸೋಹ ಭವನ ಉದ್ಘಾಟನೆ, ಗುರು ಭವನ ಉದ್ಘಾಟನೆ ಸೇರಿ ವಿವಿಧ ಕಾರ್ಯಕ್ರಮಗಳ ಕುರಿತು ಚರ್ಚಿಸಲಿದ್ದು ಸಮುದಾಯ ಬಾಂಧವರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕೋರಿದೆ.

# ಆಲೂಗಡ್ಡೆ ಬೆಳೆ ವಿಸ್ತೀರ್ಣ ಕುಸಿತ: ಅಧ್ಯಯನಕ್ಕೆ ಡಿಸಿ ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ 50 ಸಾವಿರ ಹೆಕ್ಟೇರ್‌ನಲ್ಲಿ ಬಿತ್ತನೆಯಾಗುತ್ತಿದ್ದ ಆಲೂಗಡ್ಡೆ ಈಗ 5 ಸಾವಿರ ಹೆಕ್ಟೇರ್‌ಗೆ ಕುಸಿತ ಕಂಡಿದ್ದು ಅದಕ್ಕೆ ಕಾರಣ ಹುಡುಕಬೇಕು. ಈ ಬಗ್ಗೆ ತಜ್ಞರೊಂದಿಗೆ ಚರ್ಚಿಸಲು ಜ. 26ರಂದು ಆಲೂಗಡ್ಡೆ ಮೇಳ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.

ನಗರದ ತಾಲ್ಲೂಕು ಪಂಚಾಯಿತಿ ಸಂಭಾಂಗಣದಲ್ಲಿ ಶುಕ್ರವಾರ ತೋಟಗಾರಿಕೆ ಇಲಾಖೆ, ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆ ವತಿಯಿಂದ ಹಮ್ಮಿಕೊಂಡಿದ್ದ ಸುಸ್ಥಿರ ಹಾಗು ಗುಣಮಟ್ಟದ ಆಲೂಗಡ್ಡೆ ಬೀಜೋತ್ಪಾದನಾ ಕ್ರಮಗಳು ಹಾಗೂ ಕಾನೂನು ಕುರಿತು ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಆಲೂಗಡ್ಡೆ ಬೆಳೆಗಾರರು ಸಾಕಷ್ಟು ಸವಾಲು ಎದುರಿಸಬೇಕಾಗುತ್ತದೆ. ಬಿತ್ತನೆಯಿಂದ ಮಾರಾಟದ ತನಕ ಹತ್ತಾರು ಕೆಲಸಗಳಿರುತ್ತವೆ. ಈ ಎಲ್ಲಾ ಸಂಕಷ್ಟಗಳನ್ನುಮೀರಿ ದಾಖಲೆ ಪ್ರಮಾಣದಲ್ಲಿ ಬಿತ್ತನೆಯಾಗುತ್ತಿದ್ದ ಆಲೂಗಡ್ಡೆ ಈಗ ವೈಭವವನ್ನು ಕಳೆದುಕೊಳ್ಳುತ್ತಿದೆ. ಫಸಲು ಲಾಭದಾಯಕವಾಗಿ ಬರಲು ಏನು ಮಾಡಬೇಕು. ವಿಮೆ ಕಾನೂನು ಬದಲಾಗಬೇಕಾ ಎಂಬುದರ ಕುರಿತು ಗಂಭೀರ ಚರ್ಚೆಗಳಾಗಬೇಕಿಯೆದೆ ಎಂದರು. ಈರುಳ್ಳಿ, ಟೊಮ್ಯಾಟೊ ಬಳಿಕ ನಂತರದ ಸ್ಥಾನವನ್ನು ಆಲೂಗಡ್ಡೆ ಹೊಂದಿದೆ. ಆಲೂಗಡ್ಡೆ ಮನೆಗಳಲ್ಲಿ ಅತ್ಯವಶ್ಯಕವಾಗಿ ಇರುವ ಪದಾರ್ಥ. ಆದರೂ ರೈತರಿಗೆ ಲಾಭದಾಯಕ ಬೆಳೆಯಾಗದೆ ಇರಲು ಕಾರಣವೇನೆಂಬ ಪ್ರಶ್ನೆಗೆ ಉತ್ತರ ಕಂಡುಕೊಳ್ಳಬೇಕಿದೆ ಎಂದು ತಿಳಿಸಿದರು.




ಕಾರೆಕೆರೆ ಕೃಷಿಮಹಾವಿದ್ಯಾಲಯದ ಡೀನ್ ಡಾ. ಮುನಿಸ್ವಾಮಿಗೌಡ ಮಾತನಾಡಿ, ಭಾರತದ ಜನಸಂಖ್ಯೆ 140 ಕೋಟಿ ಇದೆ. ಆಹಾರ ಪದಾರ್ಥಕ್ಕೆ ಬೇಡಿಕೆಗೆ ಅನುಗುಣವಾಗಿ ಆಲೂಗಡ್ಡೆ ಬಿತ್ತನೆ ಪ್ರಮಾಣದಲ್ಲೂ ಹೆಚ್ಚಾಗಬೇಕಿತ್ತು. ಆದರೆ ವರ್ಷದಿಂದ ವರ್ಷಕ್ಕೆ ಬೆಳೆ ಪ್ರಮಾಣ ಕಡಿಮೆಯಾಗಲು ಕಾರಣ ಏನೆಂಬುದು ಆಶ್ಚರ್ಯದ ಸಂಗತಿ. ಮಾನವನ ದುರಾಸೆ ಹಾಗು ಹಸ್ತಕ್ಷೇಪದಿಂದ ಶೇ. 33 ರಷ್ಟು ಭೂಮಿ ನಾಶವಾಗಿದೆ. ಮನಸೋಯಿಚ್ಛೆ ನೀರು ಹಾಯಿಸಿದರ ಹಾಗೂ ರಾಸಾಯನಿಕ ಬಳಸಿ ಮಣ್ಣಿನ ಫಲವತ್ತತೆಯನ್ನು ಹಾಳು ಮಾಡಿದ್ದೇವೆ. ಸಾರಜನಕ ಬಳಕೆಯಿಂದ ಇಳುವರಿ ಕುಂಠಿತವಾಗುತ್ತಿದೆ. ಹವಾಮಾನ ಆಧಾರಿತ ಬೆಳೆ ಕೈಗೊಳ್ಳದಿದ್ದರೆ ಭವಿಷ್ಯದ ದಿನಗಳು ಇನ್ನಷ್ಟು ಕಷ್ಟಕರವಾಗಲಿವೆ ಎಂದರು.

ತೋಟಗಾರಿಕೆ ಇಲಾಖೆ ಜಂಟಿ ಉಪನಿರ್ದೇಶಕ ಯೋಗೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಆಲೂಗಡ್ಡೆ ಬೆಳೆಗೆ ಪ್ರೋತ್ಸಾಹ ನೀಡುವ ಅವಶ್ಯಕತೆಯಿದೆ. ವರ್ತಕರು ಹಾಗು ಬೆಳೆಗಾರರು, ಎನ್‌ಜಿಒಗಳಿಗೆ ಬಿತ್ತನೆ ಕ್ರಮಗಳ ಕುರಿತು ಅರಿವು ಮೂಡಿಸಲು ಕ್ರಮ ವಹಿಸಲಾಗಿದೆ ಎಂದರು. ಮುಂದಿನ ಮೂರು ತಿಂಗಳಲ್ಲಿ ಆಲೂಗಡ್ಡೆಗೆ ಪೂರಕ ವಾತಾವರಣ ಸೃಷ್ಟಿಸಲು ಮೊದಲ ಹೆಜ್ಜೆ ಇಟ್ಟಿದ್ದೇವೆ. ಪಂಜಾಬ್‌ನ ಜಲಂಧರ್‌ನಿಂದ ತರಿಸಿಕೊಳ್ಳುವ ಆಲೂಗಡ್ಡೆಗೂ ಸ್ಥಳೀಯವಾಗಿ ಬೀಜೋತ್ಪಾದನೆ ಮೂಲಕ ನೀಡುವ ಬಿತ್ತನೆ ಆಲೂಗಡ್ಡೆಗೂ ಇರುವ ವ್ಯತ್ಯಾಸಗಳನ್ನು ರೈತರು ಅರಿಯಬೇಕು ಎಂದು ಹೇಳಿದರು.

ಬೆಂಗಳೂರು ತೋಟಗಾರಿಕಾ ಮಹಾವಿದ್ಯಾಲಯದ ಪ್ರೊ. ಡಾ.ಅಮರನಂಜುಂಡೇಶ್ವರ, ರೈತರಾದ ಬಿ.ಕೆ.ಮಂಜುನಾಥ್, ಸುರೇಶ್ ಹಾಗೂ ಆಲೂಗಡ್ಡೆ ವರ್ತಕರು ಹಾಜರಿದ್ದರು.

### ಶುಂಠಿ ಬೆಳೆ ನಿಷೇಧಕ್ಕೆ ಜೆಆರ್‌ಕೆ ಒತ್ತಾಯ

ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಜೆ.ಆರ್.ಕೆಂಚೇಗೌಡ ಮಾತನಾಡಿ, ಜಿಲ್ಲೆಯ ರೈತರನ್ನು ಶುಂಠಿ ಬೆಳೆ ಕಾಡುತ್ತಿದೆ. ಕೇರಳದಲ್ಲಿ ಯತೇಚ್ಛವಾಗಿ ಬೆಳೆಯುತ್ತಿದ್ದ ಶುಂಠಿಗೆ ಅಲ್ಲಿನ ಸರ್ಕಾರ ಕಡಿವಾಣ ಹಾಕಿದ ಬಳಿಕ ಕೊಡಗು ಭಾಗದ ಮೂಲಕ ಕರ್ನಾಟಕವನ್ನು ಪ್ರವೇಶಿಸಿತು. ಈಗ ಉತ್ತರ ಕರ್ನಾಟಕ ಜಿಲ್ಲೆಗಳನ್ನು ಆವರಿಸಿಕೊಂಡಿದೆ. ಅತಿಯಾದ ಕ್ರಿಮಿನಾಶಕ ಬಳಕೆಯಿಂದ ಮಣ್ಣಿನ ಫಲವತ್ತತೆ ಹಾಳಾಗುತ್ತಿದೆ. ರೈತರು ಹಾಗು ಭೂಮಿ ಉಳಿಯಬೇಕೆಂದರೆ ಶುಂಠಿ ಬೆಳೆಯನ್ನು ನಿಷೇಧಿಸಬೇಕು. ಕನಿಷ್ಟ ಎರಡು ವರ್ಷಗಳ ಮಟ್ಟಿಗಾದರೂ ಬೆಳೆಗೆ ಕಡಿವಾಣ ಹಾಕಬೇಕೆಂದು ಅವರು ಒತ್ತಾಯಿಸಿದರು.

# ಕಾನೂನು ಬಾಹಿರ ಕೃತ್ಯ ತಡೆಗೆ ಎಲ್ಲರ ಸಹಕಾರ ಅಗತ್ಯ

## ಜಿಲ್ಲಾ ನ್ಯಾಯಾಧೀಶ ರವಿಕುಮಾರ್ ಸಲಹೆ | ರಸ್ತೆ ಸುರಕ್ಷತಾ ಸಪ್ತಾಹ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ಪೊಲೀಸರ ಕರ್ತವ್ಯಕ್ಕೆ ಜನಪ್ರತಿನಿಧಿಗಳ ಹಸ್ತಕ್ಷೇಪ ಮಾಡುವುದಕ್ಕೆ ಸಂಪೂರ್ಣ ಕಡಿವಾಣ ಬೀಳಬೇಕು. ಹೆಲ್ಮೆಟ್ ಧರಿಸದ ಬೈಕ್ ಸವಾರನೂ ರಾಜಕಾರಣಿಗಳಿಂದ ಪೊಲೀಸರಿಗೆ ಕರೆ ಮಾಡಿಸುವ ಸಂಸ್ಕೃತಿ ಒಳ್ಳೆಯದಲ್ಲವೆಂದು ಪ್ರಭಾರ ಜಿಲ್ಲಾ ಮತ್ತು ಪ್ರಧಾನ ಸತ್ರ ನ್ಯಾಯಾಧೀಶ ರವಿಕುಮಾರ್ ಹೇಳಿದರು.

ಜಿಲ್ಲಾಡಳಿತ, ರಸ್ತೆ ಸುರಕ್ಷತಾ ಸಮಿತಿ ವತಿಯಿಂದ ರಸ್ತೆ ಸುರಕ್ಷೆ-ಜೀವದ ರಕ್ಷೆ ಎಂಬ ಧ್ಯೇಯ ವಾಕ್ಯದೊಂದಿಗೆ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ಏರ್ಪಡಿಸಿದ್ದ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಉದ್ಘಾಟಿಸಿ ಮಾತನಾಡಿ, ಪೊಲೀಸರ ಕರ್ತವ್ಯ ನಿರ್ವಹಣೆಗೆ ಜನಪ್ರತಿನಿಧಿಗಳು ಹಸ್ತಕ್ಷೇಪ ಮಾಡಬಾರದು. ಪ್ರತಿಯೊಬ್ಬರೂ ಪೊಲೀಸರಿಗೆ ಸಹಕಾರ ನೀಡಿದರೆ ಅಪರಾಧ ಪ್ರಕರಣ ತಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಹೆಲ್ಮೆಟ್ ಧರಿಸದೆ ಅಥವಾ ಮದ್ಯಪಾನ ಮಾಡಿ ವಾಹನ ಚಲಾಯಿಸಿದವರ ವಿರುದ್ಧ ಪೊಲೀಸರು ಕ್ರಮ ಕೈಗೊಳ್ಳುವಾಗ ಕೆಲವು ಜನಪ್ರತಿನಿಧಿಗಳು ಪ್ರಭಾವ ಬಳಸಿ ದೂರವಾಣಿ ಕರೆ ಮಾಡಿಸುವಂತಹ ಪ್ರವೃತ್ತಿ ಹೆಚ್ಚಾಗಿದೆ. ಇಂತಹ ಹಸ್ತಕ್ಷೇಪದಿಂದಲೇ ಅಪಘಾತಗಳು ಹೆಚ್ಚಾಗುತ್ತಿವೆ ಎಂದರು.

ವಿಮೆ ಇಲ್ಲದೆ ಯಾವ ಕಾರಣಕ್ಕೂ ವಾಹನ ಚಲಾಯಿಸಬಾರದು. 18 ವರ್ಷದ ಮಕ್ಕಳಿಗೆ ಪರವಾನಗಿ ಇಲ್ಲದೆ ವಾಹನ ನೀಡಬಾರದು. ವಾಹನ ಚಲಾಯಿಸಿ ಅಪಘಾತವಾದರೆ ವಾಹನ ಮಾಲೀಕರ ಮೇಲೆ ಕ್ರಮ ಕೈಗೊಳ್ಳಲಾಗುತ್ತದೆ. ಜಿಲ್ಲೆಯಲ್ಲೇ ಹೆಲ್ಮೆಟ್ ಧರಿಸದೆ ಶೇ.80 ರಷ್ಟು ಜನರು ವಾಹನ ಚಲಾಯಿಸುತ್ತಾರೆ. ಸಾರ್ವಜನಿಕರು ಕೂಡ ಯಾವ ಕಾರಣಕ್ಕೂ ಕಾನೂನು ಉಲ್ಲಂಘಿಸದೆ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ವಾಹನ ಚಲಾಯಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಮಾತನಾಡಿ, ರಸ್ತೆ ಅಪಘಾತದಲ್ಲಿ ಜಿಲ್ಲೆಗೆ ನಾಲ್ಕನೇ ಸ್ಥಾನವಿದ್ದು ವಾಹನ ಚಾಲಕರು ಜಾಗರೂಕತೆ ವಹಿಸುವ ಮೂಲಕ ಅಪಘಾತ ಪ್ರಮಾಣ ತಗ್ಗಿಸಬೇಕೆಂದು ಹೇಳಿದರು.

ರಸ್ತೆ ನಿಯಮ ಪಾಲಿಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ. ಜಿಲ್ಲಾಡಳಿತ, ಪೊಲೀಸ್ ಇಲಾಖೆ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ನಿರಂತರವಾಗಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಾಗುತ್ತಿದೆ. ಆದರೂ ಸಹ ಅಪಘಾತಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿವೆ. ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವುದು ವೇಗದ ಚಾಲನೆ, ಮೊಬೈಲ್‌ಬಳಕೆ ಅವಘಡಗಳಿಗೆ ಕಾರಣವಾಗಿದೆ. ಸಾರ್ವಜನಿಕರು ಜವಾಬ್ದಾರಿಯುತವಾಗಿ ರಸ್ತೆ ನಿಯಮ ಪಾಲಿಸಬೇಕು. ಅದರಿಂದ ಕಾನೂನು ಉಲ್ಲಂಘನೆ ಆಗುವುದು ಕಡಿಮೆ ಆಗುತ್ತದೆ. ವಾಹನ ಚಾಲಕರು ಅದಕ್ಕೆ ಸಹಕಾರ ನೀಡಬೇಕು ಎಂದರು.

ರಸ್ತೆ ಸುರಕ್ಷಣೆ ಮತ್ತು ವಾಹನಗಳ ಸುರಕ್ಷತೆ ಜೊತೆಗೆ ಸಾರ್ವಜನಿಕರು, ಪ್ರಯಾಣಿಕರ ಹಿತ ಕಾಪಾಡಬೇಕು. ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಕಾರು ಇತರೆ ವಾಹನಗಳನ್ನು ಚಲಾಯಿಸುವಾಗ ಸೀಟ್ ಬೆಲ್ಟ್ ಹಾಕಬೇಕು. ವೇಗದ ಮಿತಿ ನಿಯಂತ್ರಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಜಿಲ್ಲೆಯಲ್ಲಿ 2024ರಲ್ಲಿ 1208 ಅಪಘಾತ ಪ್ರಕರಣ ವರದಿಯಾಗಿದ್ದು 219 ಜನರು ಮರಣ ಹೊಂದಿದ್ದಾರೆ. 2025ರಲ್ಲಿ 1328 ಅಪಘಾತ ನಡೆದಿದ್ದು 260 ಜನರು ಮೃತಪಟ್ಟಿದ್ದಾರೆ. ಇಂತಹ ಘಟನೆಗಳಿಂದ ಎಷ್ಟು ಕುಟುಂಬಗಳಿಗೆ ತೊಂದರೆಯಾಗುತ್ತದೆ ಎಂಬುದನ್ನು ಅರಿಯಬೇಕು. ಎಷ್ಟೋ ಮಕ್ಕಳು ಅನಾಥರಾಗುತ್ತಿದ್ದಾರೆ. ತಂದೆ-ತಾಯಿಗಳು ಮಕ್ಕಳನ್ನು ಕಳೆದುಕೊಳ್ಳುತ್ತಿದ್ದಾರೆ. ವಾಹನ ಚಲಾಯಿಸುವಾಗ ರಸ್ತೆಗೆ ಅಡ್ಡಲಾಗಿ ಪ್ರಾಣಿಗಳು ಬರುತ್ತವೆ. ಸಾಕಷ್ಟು ಜಾಗರೂಕರಾಗಿದ್ದರೆ ಮಾತ್ರ ನಿರ್ದಿಷ್ಟ ಗುರಿ ತಲುಪಲು ಸಾಧ್ಯವಾಗುತ್ತದೆಂದರು.

ಚಾಲಕರಿಗೆ ಅಗತ್ಯವಿರುವ ಮಾಹಿತಿಗಳನ್ನುಪೋಸ್ಟರ್‌ಮೂಲಕ ನಾವು ನೀಡುತ್ತಿದ್ದೇವೆ. ಆರೋಗ್ಯದ ಕಡೆಗೆ ಹೆಚ್ಚಿನ ಒತ್ತು ನೀಡಬೇಕು. ಕೆಲವು ಚಾಲಕರು ಗುಟ್ಕಾ, ತಂಬಾಕು ರಸವನ್ನುಉಗಿಯಲು ಕಿಟಕಿಯಿಂದ ತಲೆ ಹೊರಹಾಕುತ್ತಾರೆ. ಆ ಒಂದು ಸೆಕೆಂಡ್‌ನಲ್ಲಿ ಅಪಘಾತಗಳು ಆಗುತ್ತವೆ. ಇವುಗಳ ಬಗ್ಗೆ ಎಚ್ಚರ ವಹಿಸಬೇಕೆಂದು ಜಿಲ್ಲಾಧಿಕಾರಿ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಜಿ.ಕೆ. ದಾಕ್ಷಾಯಿಣಿ ಮಾತನಾಡಿ, ಯುವ ಪೀಳಿಗೆ ಮೋಜು ಮಸ್ತಿಗಾಗಿ ವೇಗವಾಗಿ ವಾಹನ ಚಾಲನೆ ಮಾಡುತ್ತಾರೆ. ಅದರಿಂದ ಅಮೂಲ್ಯ ಜೀವಗಳನ್ನು ಕಳೆದುಕೊಳ್ಳುತ್ತಿದ್ದಾರೆ. ಕಾನೂನು ಹಾಗು ಜೀವನ ಮೌಲ್ಯಗಳನ್ನುಅರಿತು ಎಚ್ಚರಿಕೆಯಿಂದ ವಾಹನ ಓಡಿಸಬೇಕೆಂದರು.

ಅಪಘಾತ ಸಂಭವಿಸಿದ ಸಂದರ್ಭದಲ್ಲಿ ಸರಿಯಾದ ಅರಿವಿಲ್ಲದೆ ಗಾಯಾಳುಗಳಿಗೆ ನೀರು ಕುಡಿಸುವುದು ಅಪಾಯಕಾರಿ. ಪ್ರಥಮ ಚಿಕಿತ್ಸೆ ನೀಡಿ ತಕ್ಷಣ ಆಸ್ಪತ್ರೆಗೆ ರವಾನಿಸಬೇಕು, ಅಪಘಾತವಾದ ಸ್ಥಳದಲ್ಲಿ ವಿಡಿಯೋ, ಫೋಟೋ ತೆಗೆದು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುವ ಪ್ರವೃತ್ತಿಯನ್ನುಮೊದಲು ನಿಲ್ಲಿಸಬೇಕೆಂದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಕಾಶ್ ಮಾತನಾಡಿ, ಸಾರಿಗೆ ಇಲಾಖೆಯಿಂದ ಈಗಾಗಲೇ ಹಮ್ಮಿಕೊಳ್ಳಲಾಗಿರುವ ವಿವಿಧ ಜಾಗೃತಿ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಕೆಎಸ್‌ಆರ್‌ಟಿಸಿ, ಆಟೋ ಮತ್ತುಟ್ಯಾಕ್ಸಿ ಚಾಲಕರು, ಮಾಲೀಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಉಪಅರಣ್ಯ ಸಂರಕ್ಷಣಾಧಿಕಾರಿ ಸೌರಭ್ ಕುಮಾರ್, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ಗಿರೀಶ್, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ, ಹಿರಿಯ ಮೋಟಾರು ತಪಾಸಣಾಧಿಕಾರಿ ಯಶವಂತ್, ಎಸ್.ಎಸ್.ಪಾಷಾ, ಪತ್ರಕರ್ತ ರವಿ ನಾಕಲಗೂಡು ಮತ್ತಿತರರಿದ್ದರು.

# ಪರಸ್ಪರ ಸಹಕಾರದಿಂದ ಸಹಕಾರಿ ಕ್ಷೇತ್ರ ಏಳಿಗೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಮಾಡಾಳು: ಪರಸ್ಪರ ಸಹಕಾರದಿಂದ ಸಹಕಾರಿ ಕ್ಷೇತ್ರ ಅಭಿವೃದ್ಧಿ ಹೊಂದಲು ಸಾಧ್ಯವೆಂದು ನಿರಂಜನ ಪೀಠ ಸೌಹಾರ್ದ ಸಹಕಾರ ಸಂಘದ ಅಧ್ಯಕ್ಷ ಶ್ರೀ ರುದ್ರಮುನಿ ಸ್ವಾಮೀಜಿ ತಿಳಿಸಿದರು.

ಅರಸೀಕೆರೆ ತಾಲ್ಲೂಕಿನ ಕಣಕಟ್ಟೆ ಹೋಬಳಿ ಮಾಡಾಳು ಗ್ರಾಮದ ನಿರಂಜನ ಪೀಠದ ಆವರಣದಲ್ಲಿ ಆಯೋಜಿಸಿದ್ದ ಸೌಹಾರ್ದ ಸಹಕಾರ ಸಂಘದ 2026ನೇ ಸಾಲಿನ ಸಹಕಾರ ಸಪ್ತಾಹ ಕಾರ್ಯಕ್ರಮ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಸ್ವಾಮೀಜಿ ಸಹಕಾರ ಸಂಸ್ಥೆಗಳಲ್ಲಿ ಆಡಳಿತ ಮಂಡಳಿಯ ಅಧ್ಯಕ್ಷರು, ನಿರ್ದೇಶಕರು ಹಾಗೂ ನೌಕರ ವರ್ಗ ಪಾರದರ್ಶಕವಾಗಿ ಬಡವ ಬಲ್ಲಿದ ಎಂಬ ತಾರತಮ್ಯವಿಲ್ಲದೆ ಉತ್ತಮ ಮನೋಭಾವ ಹೊಂದಿ ಕರ್ತವ್ಯ ನಿರ್ವಹಿಸಿದಾಗ ಮಾತ್ರ ಸ್ಥಳೀಯ ಸಂಸ್ಥೆಗಳು ಪ್ರಗತಿ ಪಥದಲ್ಲಿ ಸಾಗುವುದಲ್ಲದೆ ಸಹಕಾರ ಸಂಘದ ಷೇರುದಾರರಿಗೆ ಮತ್ತು ರೈತರಿಗೆ ಆರ್ಥಿಕ ನೆರವು ನೀಡಲು ಅನುಕೂಲವಾಗುತ್ತದೆ ಎಂದರು.

ಗ್ರಾಮೀಣ ಭಾಗದಲ್ಲಿ ಇಂತಹ ಸಹಕಾರ ಸಂಘಗಳ ಸ್ಥಾಪಿಸಿ ಆರ್ಥಿಕವಾಗಿ ಹಿನ್ನಡೆಯಲಿರುವ ಮತ್ತು ದುರ್ಬಲವಾಗಿರುವ ಸಂಘದ ಸದಸ್ಯರಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡಿ ಸ್ವಾವಲಂಬಿಗಳನ್ನಾಗಿ ಮಾಡಿದಾಗ ಮಾತ್ರ ಅವರ ಬದುಕು ಹಸನಾಗುತ್ತದೆ ಎಂದು ಹೇಳಿದರು.

ಸೌಹಾರ್ದ ಸಹಕಾರ ಸಂಘದ ಉಪಾಧ್ಯಕ್ಷ ಎನ್.ಜಿ.ಮರುಳಸಿದ್ದಸ್ವಾಮಿ, ನಾಗಸಮುದ್ರ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಎಸ್.ಎಂ.ಗಂಗಾಧರ್, ಸಂಘದ ನಿರ್ದೇಶಕರಾದ ಸುಧಾ ಮಹೇಶ ಕುಮಾರ್, ದುಮ್ಮೇನಹಳ್ಳಿ ಮುಖಂಡರಾದ ಮಾಡಾಳು ಶಿವಲಿಂಗಪ್ಪ, ಸಂಘದ ವೈ.ಬಿ.ನಟರಾಜ್, ಕಾರ್ಯನಿರ್ವಹಣಾಧಿಕಾರಿ ಆರ್.ಬಿ.ಸುಷ್ಮಾ ಉಪಸ್ಥಿತರಿದ್ದರು.

# ಸತ್ಯಮಂಗಲ ಕೆರೆ ಅಂಗಳದಲ್ಲಿ ಪರಿಸರ ಜಾಗೃತಿಗಾಗಿ ಚಿತ್ತಾರ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಚಿತ್ಕಲಾ ಫೌಂಡೇಷನ್ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ನಗರದ ಸತ್ಯಮಂಗಲ ಕೆರೆ ಆವರಣದಲ್ಲಿ ಗುರುವಾರ ಪರಿಸರ ಜಾಗೃತಿಗಾಗಿ ಚಿತ್ತಾರ ಅಭಿಯಾನ ಹಮ್ಮಿಕೊಳ್ಳಲಾಗಿತ್ತು.

ಅಭಿಯಾನಕ್ಕೆ ಚಾಲನೆ ನೀಡಿದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ ಮಾತನಾಡಿ, ಚಿತ್ಕಲಾ ಫೌಂಡೇಷನ್ ಅಧ್ಯಕ್ಷ ಬಿ.ಎಸ್ .ದೇಸಾಯಿ ಅವರು ಹಲವು ದಶಕಗಳಿಂದ ಚಿತ್ರಕಲಾ ಕೌಶಲದ ಮೂಲಕ ಪರಿಸರ ಜಾಗೃತಿ ಮೂಡಿಸುತ್ತಿದ್ದಾರೆ. ಚಿತ್ರಕಲಾ ಶಿಕ್ಷಕರಾಗಿ ಹಾಸನದಲ್ಲಿ ನೆಲೆಯೂರಿದ ಅವರು ಕಾರ್ಯಕ್ಷಮತೆಯ ಮೂಲಕ ಉತ್ತಮ ಕಲಾವಿದರಾಗಿ ಗುರುತಿಸಿಕೊಂಡಿದ್ದಾರೆ. ತಮ್ಮದೇಯಾದ ಆತ್ಮೀಯ ಬಳಗ ಸೃಷ್ಟಿಸಿ ಜಿಲ್ಲೆಯ ಪ್ರಾಕೃತಿಕ ಸ್ಥಳ, ಬೆಟ್ಟಗುಡ್ಡ, ಕೆರೆಕಟ್ಟೆಗಳನ್ನು ಸುತ್ತಾಡಿ ಕಲಾ ಕುಂಚದಿಂದ ವಿಶ್ವಕ್ಕೆ ಪರಿಚಯಿಸಿದ್ದಾರೆ. ಹುಣಸಿನಕೆರೆ ಹಾಗು ಅಲ್ಲಿಗೆ ವಿದೇಶಗಳಿಂದ ಬರುವ ಅಪರೂಪದ ಪಕ್ಷಿಗಳನ್ನು ಜಗತ್ತಿಗೆ ಪರಿಚಯಿಸಿದ ಕೀರ್ತಿ ದೇಸಾಯಿ ಅವರಿಗೆ ಸಲ್ಲುತ್ತದೆ. ನೂರಾರು ಮಕ್ಕಳಿಗೆ ಚಿತ್ರಕಲೆಯ ತರಬೇತಿ ನೀಡಿ ಉತ್ತಮ ಭವಿಷ್ಯ ಕಟ್ಟಿಕೊಟ್ಟಿದ್ದಾರೆ. ಬಿ.ಎಸ್.ದೇಸಾಯಿ ಅವರ ಪರಿಸರ ಪ್ರಿಯ ಕಾರ್ಯಗಳಿಗೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಬೆಂಬಲವಾಗಿ ಇರುತ್ತದೆ ಎಂದರು.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಮಾತನಾಡಿ, ಜನರಲ್ಲಿ ಪರಿಸರ ಜಾಗೃತಿ ಮೂಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಬಿ.ಎಸ್.ದೇಸಾಯಿ ಅಂತಹ ವ್ಯಕ್ತಿ ನಮ್ಮ ಜಿಲ್ಲೆಗೆ ಸಿಕ್ಕಿದ್ದು ಸೌಭಾಗ್ಯ. ಸ್ವಾರ್ಥಕ್ಕಾಗಿ ಏನನ್ನೂ ಮಾಡದೆ ಸಮಾಜಮುಖಿ ಕೆಲಸಗಳ ಮೂಲಕ ಗುರುತಿಸಿಕೊಂಡಿರುವ ಅವರು ಪರಿಸರ ಸಂರಕ್ಷಣೆಗೆ ತಮ್ಮದೇಯಾದ ಕೊಡುಗೆ ನೀಡಿದ್ದಾರೆ ಎಂದರು.

ಪ್ರಾಕೃತಿಕವಾಗಿ ಶ್ರೀಮಂತವಾಗಿರುವ ಹಾಸನ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಉತ್ತೇಜನಕ್ಕೆ ಕ್ರಮ ಕೈಗೊಳ್ಳಬೇಕೆಂದು ಸರ್ಕಾರಕ್ಕೆ ಆಗ್ರಹಿಸುತ್ತಲೇ ಬಂದಿದ್ದೇವೆ. ಆ ಕೆಲಸವನ್ನುಬಿ. ಎಸ್.ದೇಸಾಯಿ ಮೌನವಾಗಿ ಮಾಡುತ್ತಿದ್ದಾರೆ. ಹಲವಾರು ವಿದ್ಯಾರ್ಥಿಗಳಿಗೆ ಚಿತ್ರಕಲೆ ವಿದ್ಯೆ ಕಲಿಸಿ ಮಾದರಿಯಾಗಿದ್ದಾರೆಂದರು.

ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷ ರವಿ ನಾಕಲಗೂಡು ಅವರು, ಬಿ.ಎಸ್.ದೇಸಾಯಿ ಅವರ ಕೊಡುಗೆಯನ್ನು ಸ್ಮರಿಸಿದರು.

ಚಿತ್ಕಲಾ ಫೌಂಡೇಷನ್ ಅಧ್ಯಕ್ಷ ಬಿ.ಎಸ್.ದೇಸಾಯಿ ಅವರು ಮಾತನಾಡಿ, ಹಾಸನ ನೈಸರ್ಗಿಕವಾಗಿ ಶ್ರೀಮಂತ ಜಿಲ್ಲೆ. ಆದರೆ ಇತ್ತೀಚಿನ ದಿನಗಳಲ್ಲಿ ಇಲ್ಲಿಯೂ ಪರಿಸರ ಜಾಗೃತಿ ಮೂಡಿಸುವ ಅನಿವಾರ್ಯತೆ ಸೃಷ್ಟಿಯಾಗಿರುವುದು ವಿಷಾದನೀಯ. ಅಭಿವೃದ್ಧಿ ನೆಪದಲ್ಲಿ ಪರಿಸರವನ್ನು ಹಾಳು ಮಾಡುತ್ತಿದ್ದೇವೆ. ಈ ಸಂಬಂಧ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಚಿತ್ಕಲಾ ಫೌಂಡೇಷನ್‌ನಿಂದ ಪ್ರತಿ ತಿಂಗಳ ಮೊದಲ ಭಾನುವಾರ ಜಿಲ್ಲಾದ್ಯಂತ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಿದ್ದು ಅದಕ್ಕೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಕೈ ಜೋಡಿಸಿರುವುದು ಸಂತಸ ತಂದಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಮಾಜಿ ಜಿಲ್ಲಾಧ್ಯಕ್ಷ ಉದಯರವಿ, ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಶಶಿಕಲಾ ದೇಸಾಯಿ, ಕಿಶೋರ ಕಲಾವಿದರಾದ ತನಿಷಾ, ಸಾನ್ವಿ, ಪೋಷಕರಾದ ಸವಿತಾ, ಮಂಜುಳಾ ಶಿವಕುಮಾರ್ ಹಾಗೂ ಇತರರಿದ್ದರು.

# ಡಾ. ಗುರುರಾಜ ಹೆಬ್ಬಾರ್ ಮರೆಯಲಾರದ ಶಕ್ತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಉಸಿರು ನಿಂತ ಮೇಲೂ ಹೆಸರು ಜನರ ಮನಸ್ಸಿನಲ್ಲಿದ್ದೆ ಎಂದರೆ ಅವರು ಜೀವಂತವಾಗಿದ್ದಾರೆಂದರ್ಥ. ಅಂತವರ ಸಾಲಿಗೆ ಡಾ. ಗುರುರಾಜ ಹೆಬ್ಬಾರ್ ಸೇರುತ್ತಾರೆ ಎಂದು ಖ್ಯಾತ ವಾಗ್ಮಿ ಡಾ.ಕೆ.ಪಿ.ಪುತ್ತೂರಾಯ ಹೇಳಿದರು.

ದಿ. ಡಾ. ಗುರುರಾಜ್ ಹೆಬ್ಬಾರ್ ಮೆಮೋರಿಯಲ್ ಚಾರಿಟೆಬಲ್ ಟ್ರಸ್ಟ್, ಕಾಮಧೇನು ಸಹಕಾರಿ ವೃದ್ಧಾಶ್ರಮ ಹಾಗು ವಿವಿಧ ಸಂಘ ಸಂಸ್ಥೆಗಳ ವತಿಯಿಂದ ನಗರ ಹೊರವಲಯದ ಚೈತನ್ಯ ಮಂದಿರದಲ್ಲಿ ಡಾ. ಗುರುರಾಜ ಹೆಬ್ಬಾರ್ ಅವರ ಹುಟ್ಟು ಹಬ್ಬದ ಪ್ರಯುಕ್ತ ಏರ್ಪಡಿಸಿದ್ದ ದೇಹದಾನ-ನೇತ್ರದಾನ ನೋಂದಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕೆಲವರು ಲವಲವಿಕೆಯಿಂದ ಜೀವಿಸುತ್ತಾರೆ. ಡಾ. ಗುರುರಾಜ ಹೆಬ್ಬಾರ್ ಸಕಾರಾತ್ಮಕ ಚಿಂತನೆ ಅಳವಡಿಸಿಕೊಂಡಿದ್ದ ವ್ಯಕ್ತಿ. ಹೆಬ್ಬಾರ್ ಸತ್ತ ಮೇಲೂ ಜೀವಂತವಾಗಿರಬಹುದು ಎಂಬುದನ್ನು ತೋರಿಸಿದ್ದಾರೆ. ಅತಿಥಿ ಸತ್ಕಾರಕ್ಕೆ ಹೆಸರಾಗಿದ್ದರು. ಉಚಿತ ಚಿಕಿತ್ಸೆ ಮೂಲಕ ಜನರ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿದಿದ್ದಾರೆ ಎಂದರು.

ಸನಾತನ ಜಗತ್ತಿನ ಶ್ರೇಷ್ಠ ಧರ್ಮಗಳಲ್ಲಿ ಒಂದಾಗಿದೆ. ನೀನು ಮಾಡಿದ ಉಪಕಾರ ಮರೆತುಬಿಡು ಆದರೆ ಇತರರು ಮಾಡಿದ ಉಪಕಾರ ಮರೆಯಬೇಡ ಎಂದು ನಮ್ಮ ಧರ್ಮ ಹೇಳುತ್ತದೆ. ಆ ದಾರಿಯಲ್ಲಿ ಗುರುರಾಜ ಹೆಬ್ಬಾರ್ ಬದುಕಿದ್ದಾರೆ ಎಂದರು.

ಭಗವಂತ ನಮಗೆ ಎರಡು ಆಯ್ಕೆ ಕೊಟ್ಟಿದ್ದಾನೆ. ಒಂದು ಬಿಟ್ಟು ಹೋಗಬೇಕು ಇಲ್ಲವೇ ಕೊಟ್ಟು ಹೋಗಬೇಕು. ನೇತ್ರದಾನ ಹಾಗೂ ದೇಹದಾನ ಅತ್ಯಂತ ಶ್ರೇಷ್ಟವಾದುದು. ಯಾವುದೇ ಜಾತಿ, ಧರ್ಮ, ಕುಲ, ಮೇಲು ಕೀಳು ವ್ಯತ್ಯಾಸವಿಲ್ಲದೆ ಎಲ್ಲರೂ ದೇಹದಾನ ಮಾಡಬೇಕು. ಜಾತಿ ನಮ್ಮ ಆದ್ಯತೆಯಲ್ಲದ ವಿಷಯ. ಜಾತಿ ಆಧಾರಿತ ಲೆಕ್ಕಾಚಾರವನ್ನು ಸಂಪೂರ್ಣ ತೊಡೆದು ಹಾಕಬೇಕು. ಮನುಷ್ಯ ಜಾತಿ ಒಂದೇ ಸರ್ವಶ್ರೇಷ್ಠವೆಂದು ಪ್ರತಿಪಾದಿಸಿದರು.

ವೇದ ರಚಿಸಿದ ವ್ಯಾಸ ಅಂಬಿಗ ಜಾತಿಗೆ ಸೇರಿದರೆ ರಾಮಾಯಣ ಬರೆದ ವಾಲ್ಮೀಕಿ ಬೇಡರ ಜಾತಿಯಲ್ಲಿ ಹುಟ್ಟಿದ್ದ. ಬ್ರಾಹ್ಮಣರು ಆರಾಧಿಸುವ ಶ್ರೀ ಕೃಷ್ಣ ಗೊಲ್ಲರ ಸಮುದಾಯಕ್ಕೆ ಸೇರಿದ್ದಾನೆ. ಹುಟ್ಟಿನಿಂದ ಯಾರೂ ಪರಿಗಣನೆಗೆ ಒಳಪಡುವುದಿಲ್ಲ. ನಮ್ಮ ಪ್ರತಿಭೆ ಹಾಗೂ ಮಾಡುವ ಕೆಲಸ ನಮ್ಮನ್ನು ಒಂದು ಸ್ಥಾನಮಾನಕ್ಕೆ ಕರೆದೊಯ್ಯುತ್ತವೆಂದರು.

ಜಯದೇವ ಆಸ್ಪತ್ರೆ ಮಕ್ಕಳ ಹೃದ್ರೋಗ ತಜ್ಞೆ ಡಾ. ವಿಜಯಲಕ್ಷ್ಮಿ ಐ.ಬಾಳೆಕುಂದ್ರಿ ಮಾತನಾಡಿ, ಸ್ವಂತ ತಂದೆ-ತಾಯಿಯನ್ನು ನೋಡಿಕೊಳ್ಳದ ಸಮಾಜದಲ್ಲಿ ಬೇರೆಯವರನ್ನು ನೋಡಿಕೊಳ್ಳುವುದು ಶ್ರೇಷ್ಠ ಕೆಲಸ. ನಿಜವಾದ ಸೇವೆ ಎಂದರೆ ಅದು ಸಮಾಜ ಸೇವೆ ಎಂದು ಪರಮಶಿವ ಹೇಳಿದ್ದಾನೆ. ಜನ ಸೇವೆಯೇ ಜನಾರ್ಧನ ಸೇವೆ ಎಂಬ ಗಾದೆ ಮಾತಿದೆ. ಡಾ. ಗುರುರಾಜ ಹೆಬ್ಬಾರ್ ಅವರು ಆ ನಿಟ್ಟಿನಲ್ಲಿ ಬದುಕಿದ್ದಾರೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಹಿಮ್ಸ್ ಪ್ರಾಂಶುಪಾಲ ಡಾ. ಬಿ.ಸಿ.ರವಿಕುಮಾರ್ ಅವರು, ಗುರುರಾಜ್ ಹೆಬ್ಬಾರ್ ಹಾಸನದ ಜನಾನುರಾಗಿ, ನಿಜವಾದ ಸಮಾಜ ಸುಧಾರಕರಾಗಿದ್ದರು. ಮೈಸೂರು ಮೆಡಿಕಲ್ ಕಾಲೇಜಿನಲ್ಲಿ ಎಂಬಿಬಿಎಸ್ ಪದವಿ ಪಡೆದ ಅವರಿಗೆ ಹಣ ಮಾಡಲು ಸಾಕಷ್ಟು ಆಯ್ಕೆಗಳಿದ್ದವು. ಆದರೆ ಜನಸೇವೆಯೇ ಜನಾರ್ಧನ ಸೇವೆ ಎಂದು ನಂಬಿದ್ದ ಅವರು ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರಾಗಿ ಸೇವೆ ಆರಂಭಿಸಿದರು. ಅಲ್ಲಿಯೂ ತೃಪ್ತರಾಗದೆ ಉದ್ಯೋಗಕ್ಕೆ ರಾಜೀನಾಮೆ ನೀಡಿ ಖಾಸಗಿ ಆಸ್ಪತ್ರೆ ತೆರೆದು ಬಡವರಿಗೆ ನೆರವಾಗಿದ್ದಾರೆಂದರು.

ಬಡವರ ಬಳಿ ಚಿಕಿತ್ಸೆಗೆ ಹಣ ಪಡೆಯದೆ ಅವರೇ ದುಡ್ಡು ಕೊಟ್ಟು ಕಳುಹಿಸಿದ ಸಾಕಷ್ಟು ನಿದರ್ಶನಗಳಿವೆ. ಕೋವಿಡ್ ಸಮಯದಲ್ಲಿ ಸೇವೆ ನೀಡಲು ಬಹುತೇಕ ವೈದ್ಯರು ಹೆದರಿದರು. ಹೆಬ್ಬಾರ್ ಅವರು ಪ್ರಾಣದ ಹಂಗು ತೊರೆದು ಕೆಲಸ ಮಾಡಿದ್ದಾರೆ. ವೈದ್ಯನಾಗಿ ದೇಹಕ್ಕೆ ಚಿಕಿತ್ಸೆ ನೀಡಿದರೆ ಸಾಕಾಗುವುದಿಲ್ಲವೆಂದು ಸಮಾಜದ ವ್ಯಾದಿಗಳಿಗೂ ಚಿಕಿತ್ಸೆ ಕೊಡಬೇಕೆಂದು ಸೇವೆಯಲ್ಲಿ ತೊಡಗಿದರು. ಜನ ಕಲ್ಯಾಣ ರಿಸರ್ಚ್ ಅಂಡ್ ಚಾರಿಟೆಬಲ್ ಟ್ರಸ್ಟ್, ಸಂಜೀವಿನಿ ಸಹಕಾರಿ ಆಸ್ಪತ್ರೆ, ಜನ ಕಲ್ಯಾಣ ಸಿಟಿ ಸ್ಕ್ಯಾನಿಂಗ್ ಸೆಂಟರ್, ಕಾಮಧೇನು ಸಹಕಾರಿ ವೃದ್ಧಾಶ್ರಮ, ಹಿಮ್ಸ್ ಆವರಣದಲ್ಲಿ ಧರ್ಮ ಛತ್ರ, ಗೋ ಶಾಲೆ ಆರಂಭದ ಮೂಲಕ ಅವರು ಸಮಾಜಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆಂದರು.

ಡಾ. ಗುರುರಾಜ ಹೆಬ್ಬಾರ್ ಅವರು ಕೊನೆತನಕ ಹಣವಂತರಾಗಲಿಲ್ಲ. ಆದ್ದರಿಂದಲೇ ಅವರು ಮಾಡುವ ಒಳ್ಳೆಯ ಕಾರ್ಯಗಳಿಗೆ ದಾನಿಗಳು ಹೆಚ್ಚಾದರು. ಯಾವ ಪ್ರಶಸ್ತಿಗೂ ಅವರು ಅರ್ಜಿ ಸಲ್ಲಿಸಲಿಲ್ಲ. ಕನ್ನಡ ರಾಜ್ಯೋತ್ಸವ ಸೇರಿ ಅನೇಕ ಪುರಸ್ಕಾರಗಳು ಅವರನ್ನು ಅರಸಿ ಬಂದವು ಎಂದರು. ಜನಪ್ರಿಯ ಆಸ್ಪತ್ರೆ ವತಿಯಿಂದ ಆರೋಗ್ಯ ತಪಾಸಣೆ ಹಾಗು ರಕ್ತದಾನ ಶಿಬಿರ ಏರ್ಪಡಿಸಲಾಗಿತ್ತು. ಅನೇಕರು ದೇಹದಾನ-ನೇತ್ರದಾನಕ್ಕೆ ನೋಂದಣಿ ಮಾಡಿದರು.



ಕಾಮಧೇನು ಸಹಕಾರಿ ವೃದ್ಧಾಶ್ರಮ ಅಧ್ಯಕ್ಷ ಎಂ. ಮಾಧವ ಶೈಣೈ, ಮುತ್ತತ್ತಿ ರಾಜಣ್ಣ, ಶಾಸಕ ಹೆಚ್.ಪಿ.ಸ್ವರೂಪ್ ಅವರ ತಾಯಿ ಲಲಿತಾ, ಸಾಧ್ಯ ಟ್ರಸ್ಟ್‌ನ ಉಮೇಶ್, ಕೆ.ಎಸ್.ಚಂದನ್, ರೆಡ್ ಕ್ರಾಸ್ ಜಿಲ್ಲಾ ಸಭಾಪತಿ ಹೆಚ್.ಪಿ.ಮೋಹನ್, ಪರಿಪೂರ್ಣ ಚಾರಿಟೆಬಲ್ ಟ್ರಸ್ಟ್ ಅಧ್ಯಕ್ಷ ಹೆಚ್.ವಿ.ಲಕ್ಷ್ಮೀನಾರಾಯಣ, ಡಾ. ಗುರುರಾಜ ಹೆಬ್ಬಾರ್ ಮೆಮೊರಿಯಲ್ ಚಾರಿಟೆಬಲ್ ಟ್ರಸ್ಟ್ ಅಧ್ಯಕ್ಷೆ ಡಾ. ಜಿ. ಪ್ರತಿಭಾ, ಪ್ರಶಾಂತಿ ಸೇವಾ ಟ್ರಸ್ಟ್‌ನ ಕಾಳೇಗೌಡ ಇತರರಿದ್ದರು.

## ಇತಿಹಾಸದಲ್ಲಿ ಈ ದಿನ

### ಜನವರಿ-03

1926: ಬ್ರಿಟನ್‌ನಲ್ಲಿ ಬಿಬಿಸಿ ಮೊದಲ ಸಾರ್ವಜನಿಕ ರೇಡಿಯೋ ಪ್ರಸಾರ ಆರಂಭಿಸಿತು.

1959: ಅಲಾಸ್ಕಾ ಅಮೆರಿಕದ 49ನೇ ರಾಜ್ಯವಾಗಿ ಸೇರ್ಪಡೆಗೊಂಡಿತು. ವಿಶ್ವದ ಅತಿ ದೊಡ್ಡ ರಾಜ್ಯಗಳಲ್ಲಿ ಒಂದು.

**ಜನನ**

1831: ಸಾವಿತ್ರಿಬಾಯಿ ಫುಲೆ, ಭಾರತದ ಮೊದಲ ಮಹಿಳಾ ಶಿಕ್ಷಕಿ, ಸಮಾಜ ಸುಧಾರಕಿ, ಮಹಿಳಾ ಶಿಕ್ಷಣದ ಮುಂಚೂಣಿ ನಾಯಕಿ

1892: ಜೆ.ಆರ್.ಆರ್. ಟೋಲ್ಕಿಯನ್, ವಿಶ್ವಪ್ರಸಿದ್ಧ ಇಂಗ್ಲಿಷ್ ಸಾಹಿತಿ, ದಿ ಲಾರ್ಡ್ ಆಫ್ ದ ರಿಂಗ್ಸ್ ಕಾದಂಬರಿಯ ಕರ್ತೃ

**ಮರಣ**

2006: ನಯನತಾರಾ ಸಹಗಲ್

# ಭೀಕರ ಅಪಘಾತ: ಮೂವರು ಕೂಲಿ ಕಾರ್ಮಿಕರ ಸಾವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಅರಸೀಕೆರೆ: ಬೊಲೆರೋ ಪಿಕಪ್ ವಾಹನದ ಟೈರ್ ಬ್ಲಾಸ್ಟ್ ಆಗಿ ಪಲ್ಟಿಯಾದ ಪರಿಣಾಮ ಮೂವರು ಮೃತಪಟ್ಟು, ಇಬ್ಬರು ಗಂಭೀರ ಗಾಯಗೊಂಡಿರುವ ಘಟನೆ ತಾಲ್ಲೂಕಿನ ಬಾಣಾವರ ಹೋಬಳಿ ಚಿಕ್ಕಾರಹಳ್ಳಿ ಸಮೀಪ ನಡೆದಿದೆ.

ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲ್ಲೂಕಿನ ತಂಗ್ಲಿ ಗ್ರಾಮದ ಶಬ್ಬೀರ್ (55), ತಿಮ್ಮಣ್ಣ (53) ಹಾಗು ಸಂಜಯ್ (45) ಮೃತರು. ಹಾಸನದ ನೌಶದ್ ಹಾಗೂ ಮತ್ತೊಬ್ಬ ಗಂಭೀರ ಗಾಯಗೊಂಡಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಹಾಸನದಿಂದ ಅಡಿಕೆ ಕಟಾವು ಮಾಡಿ ಚಿಕ್ಕಮಗಳೂರಿಗೆ ತೆರಳುತ್ತಿದ್ದರು ಎನ್ನಲಾಗಿದೆ. ರಾಷ್ಟ್ರೀಯ ಹೆದ್ದಾರಿ 69ರ ಚಿಕ್ಕಾರಹಳ್ಳಿ ಗೋ ಶಾಲೆ ಬಳಿ ಏಕಾಏಕಿ ಟೈರ್ ಬ್ಲಾಸ್ಟ್ ಆದ್ದರಿಂದ ಚಾಲಕನ ನಿಯಂತ್ರಣ ತಪ್ಪಿ ವಾಹನ ಪಲ್ಟಿಯಾಗಿದೆ. ಅಪಘಾತದ ರಭಸಕ್ಕೆ ಒಬ್ಬರು ಸ್ಥಳದಲ್ಲೇ ಮೃತಪಟ್ಟರೆ ಇಬ್ಬರು ಆಸ್ಪತ್ರೆಯಲ್ಲಿ ಅಸುನೀಗಿದ್ದಾರೆ. ಬಾಣಾವರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

# ಸ್ಕಾಲರ್ಸ್ ಶಾಲೆಯಲ್ಲಿ ಹೊಸ ವರ್ಷದ ಸಂಭ್ರಮ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಸ್ಕಾಲರ್ಸ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಗುರುವಾರ ಹೊಸ ವರ್ಷವನ್ನು ಉತ್ಸಾಹದಿಂದ ಸ್ವಾಗತಿಸಲಾಯಿತು.

ಶಾಲೆಯ ಆಡಳಿತಾಧಿಕಾರಿ ಡಾ.ಹೆಚ್.ಎನ್. ಚಂದ್ರಶೇಖರ್ ಮಾತನಾಡಿ, ಹೊಸ ವರ್ಷವು ವಿದ್ಯಾರ್ಥಿಗಳಿಗೆ ಆರೋಗ್ಯ, ಯಶಸ್ಸು ಮತ್ತು ಶ್ರೇಷ್ಠತೆಯನ್ನು ಕಲ್ಪಿಸಲಿ. ಸಕಾರಾತ್ಮಕ ಗುರಿಗಳನ್ನು ಹೊಂದಿ ಶಿಸ್ತು ಮತ್ತು ಆತ್ಮವಿಶ್ವಾಸದೊಂದಿಗೆ ವಿದ್ಯಾರ್ಥಿಗಳು ಯಶಸ್ಸು ಸಾಧಿಸಬೇಕೆಂದು ಶುಭ ಕೋರಿದರು.

ಕಾರ್ಯದರ್ಶಿ ಮಮತಾ ಚಂದ್ರಶೇಖರ್ ಅವರು ವಿದ್ಯಾರ್ಥಿಗಳಿಗೆ ಶುಭ ಕೋರಿದರು. ಕೇಕ್ ಕತ್ತರಿಸುವ ಮೂಲಕ ಬೋಧಕರು ಹಾಗೂ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಸಂಭ್ರಮದಲ್ಲಿ ಭಾಗಿಯಾದರು. ಸ್ಕಾಲರ್ಸ್ ವರ್ಲ್ಡ್ ಸ್ಕೂಲ್‌ನಲ್ಲೂ ಹೊಸ ವರ್ಷ ಆಚರಿಸಲಾಯಿತು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248